ಸದನದಲ್ಲಿ ಉತ್ತರಿಸುವ
ಪ್ರಶ್ನೆಗಳ ಪಟ್ಟಿ
ಒಟ್ಟು ಪ್ರಶ್ನೆಗಳು – ೧೫

ಪಟ್ಟಿ–೧೧

# ಕರ್ನಾಟಕ ವಿಧಾನ ಪರಿಷತ್ತು

## ನೂರ ಇಪ್ಪತ್ತೈದನೆಯ ಅಧಿವೇಶನ

**ಸೋಮವಾರ, ದಿನಾಂಕ: ೦೭ನೇ ಜುಲೈ ೨೦೧೪**

---

**ಸಮೂಹ – I**

೧. ಯೋಜನೆ ಮತ್ತು ಸಾಂಖ್ಯಿಕ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಮತ್ತು ವಿಜ್ಞಾನ ಹಾಗೂ ತಂತ್ರಜ್ಞಾನ ಸಚಿವರು

೨. ಸಾರಿಗೆ ಸಚಿವರು

೩. ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು

೪. ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು

೫. ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ರಾಜ್ಯ ಸಚಿವರು

೬. ವೈದ್ಯಕೀಯ ಶಿಕ್ಷಣ ರಾಜ್ಯ ಸಚಿವರು

---

## ಆಯುರ್ವೇದ ವಿಶ್ವವಿದ್ಯಾಲಯ ಸ್ಥಾಪನೆ

**ಶ್ರೀ ಮಹಾಂತೇಶ್ ಶಿವಾನಂದ ಕೌಜಲಗಿ (ಪದವೀಧರರ ಕ್ಷೇತ್ರ) –**

೧೫೧ (೮೮೯) ವೈದ್ಯಕೀಯ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಎಷ್ಟು ಆಯುರ್ವೇದ ಕಾಲೇಜುಗಳಿವೆ ;

(ಆ) ಅವುಗಳಲ್ಲಿ ಖಾಸಗಿ ಎಷ್ಟು ; ಸರ್ಕಾರಿ ಕಾಲೇಜುಗಳು ಎಷ್ಟು ; (ಕಾಲೇಜುಗಳ ಹೆಸರು, ವಿಳಾಸ ಒದಗಿಸುವುದು)

(ಇ) ಪ್ರತಿಯೊಂದು ಕಾಲೇಜಿನಲ್ಲಿ ಎಷ್ಟು ವಿದ್ಯಾರ್ಥಿಗಳು ಪ್ರವೇಶ ಪಡೆಯುತ್ತಿರುವರು ;

(ಈ) ಆಯುರ್ವೇದ ವಿಶ್ವವಿದ್ಯಾಲಯ ಸ್ಥಾಪನೆ ಅವಶ್ಯವಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಉ) ಹಾಗಿದ್ದಲ್ಲಿ, ವಿಶ್ವವಿದ್ಯಾಲಯ ಸ್ಥಾಪಿಸಲು ಕ್ರಮ ಕೈಗೊಳ್ಳಲಾಗುವುದೇ ;

(ಊ) ಕೇಂದ್ರ ಸರ್ಕಾರದವರು ರಾಜ್ಯದಲ್ಲಿ ಆಯುರ್ವೇದ ವಿಶ್ವವಿದ್ಯಾಲಯ ಸ್ಥಾಪಿಸಲು ಸಮ್ಮತಿ ನೀಡಿದ ಸಂಗತಿ ನಿಜವೇ ;

(ಋ) ಹಾಗಿದ್ದಲ್ಲಿ, ಬೆಳಗಾವಿಯಲ್ಲಿ ಆಯುರ್ವೇದ ವಿಶ್ವವಿದ್ಯಾಲಯ ಸ್ಥಾಪಿಸಲು ಎಲ್ಲ ಮೂಲಭೂತ ಸೌಕರ್ಯ ಹೊಂದಿರುವುದರಿಂದ ವಿಶ್ವವಿದ್ಯಾಲಯ ಸ್ಥಾಪಿಸಲು ಕ್ರಮ ಕೈಗೊಳ್ಳಲಾಗುವುದೇ ?

## ಅನ್ಯಪರ ಸೇವೆಯ ರದ್ಧತಿ

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೧೫೨ (೮೪೮) ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಲ್ಲಿ ಎಷ್ಟು ಮಂದಿ ಅಧಿಕಾರಿಗಳು/ನೌಕರರನ್ನು ಅನ್ಯಪರ ಸೇವೆ (ಓ.ಓ.ಡಿ.) ಮೇಲೆ ನಿಯೋಜಿಸಲಾಗಿದೆ ; ಹಾಗೂ ಎಷ್ಟು ವರ್ಷಗಳಿಂದ ನಿಯೋಜಿಸಲಾಗಿದೆ ;

(ಆ) ಅನ್ಯಪರ ಸೇವೆಯನ್ನು ರದ್ದುಗೊಳಿಸಲು/ಕಡಿತಗೊಳಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ; ಎಂದಿನಿಂದ ರದ್ದುಗೊಳಿಸಲಾಗುವುದು ?

## ನೇರ ನೇಮಕಾತಿಯ ಮೂಲಕ ಪರಿಶಿಷ್ಟ ಜಾತಿ/ಪರಿಶಿಷ್ಟ ವರ್ಗದ ಅಭ್ಯರ್ಥಿಗಳ ನೇಮಕ

**ಶ್ರೀ ಆರ್. ಧರ್ಮಸೇನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೧೫೩ (೮೬೪) ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ೫ ವರ್ಷಗಳಿಂದ ಸರ್ಕಾರದ ವಿವಿಧ ಇಲಾಖೆಗಳಲ್ಲಿ ನೇರ ನೇಮಕಾತಿಗಳ ಮೂಲಕ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಅಭ್ಯರ್ಥಿಗಳನ್ನು ನೇಮಕಾತಿ ಮಾಡಿರುವ ಸಂಖ್ಯೆ ಎಷ್ಟು ;

(ಆ) ವಿವಿಧ ಇಲಾಖೆಗಳಲ್ಲಿ ಅಭ್ಯರ್ಥಿಗಳನ್ನು ಭರ್ತಿ ಮಾಡುವಾಗ ಸರ್ಕಾರವು ಯಾವ ಮಾನದಂಡಗಳನ್ನು ಅನುಸರಿಸುತ್ತಿದೆ ;

(ಇ) ಈ ಬ್ಯಾಕ್‌ಲಾಗ್ ಹುದ್ದೆಗಳಿಗೆ ಅಭ್ಯರ್ಥಿಗಳನ್ನು ನೇಮಕ ಮಾಡಲು ನಿಧಾನಗತಿಯ ಧೋರಣೆ ಅನುಸರಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ವಿವಿಧ ಇಲಾಖೆಗಳಲ್ಲಿ ಇಲ್ಲಿಯವರೆಗೆ ಖಾಲಿಯಿರುವ ಬ್ಯಾಕ್‌ಲಾಗ್ ಹುದ್ದೆಗಳ ಸಂಖ್ಯೆ ಎಷ್ಟು ; ಈ ಹುದ್ದೆಗಳನ್ನು ಭರ್ತಿ ಮಾಡಲು ಎಷ್ಟು ಅವಧಿಯಲ್ಲಿ ಪೂರ್ಣಗೊಳಿಸಲಾಗುತ್ತದೆ ? (ಇಲಾಖಾವಾರು ವಿವರಗಳನ್ನು ನೀಡುವುದು)

## ಸರ್ಕಾರಿ ಬಸ್ ನಿಲ್ದಾಣದ ಮೇಲ್ದರ್ಜೆ

**ಶ್ರೀ ಜಿ. ರಘು ಆಚಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೧೫೪ (೮೩೧) ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಚಿತ್ರದುರ್ಗ ಪಟ್ಟಣದ ಸರ್ಕಾರಿ ಬಸ್ ನಿಲ್ದಾಣವು ಕಿರಿದಾಗಿದ್ದು, ಪ್ರಯಾಣಿಕರು ಯಾತನೆ ಅನುಭವಿಸುತ್ತಿದ್ದಾರೆ ಈ ನಿಟ್ಟಿನಲ್ಲಿ ಸರ್ಕಾರಿ ಬಸ್ ನಿಲ್ದಾಣವನ್ನು ಮೇಲ್ದರ್ಜೆಗೆ ಏರಿಸುವ ಪ್ರಸ್ತಾವನೆ ಸರ್ಕಾರದ ಮುಂದೆ ಇದೆಯೇ ;

(ಆ) ಇದ್ದಲ್ಲಿ, ಯೋಜನೆಯ ಅನುಷ್ಠಾನವು ಯಾವ ಹಂತದಲ್ಲಿದೆ ; ಅದಕ್ಕಾಗಿ ಸಾರಿಗೆ ಇಲಾಖೆ ವತಿಯಿಂದ ಮೀಸಲಿಟ್ಟ ಅನುದಾನ ಎಷ್ಟು ? (ಮಾಹಿತಿ ಒದಗಿಸುವುದು)

## ಗಗನ ಸಖಿ ತರಬೇತಿ

**ಶ್ರೀ ವೀರಕುಮಾರ್ ಅಪ್ಪಾಸೊ ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೧೫೫೫ (೮೩೫) ಸಮಾಜ ಕಲ್ಯಾಣ ಮತ್ತು ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಳಗಾಂ ಜಿಲ್ಲೆಯಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದವರಿಗೆ ಗಗನ ಸಖಿ ತರಬೇತಿಯನ್ನು ನೀಡಲಾಗಿದೆಯೇ ; (ತಾಲ್ಲೂಕುವಾರು ವಿವರ ನೀಡುವುದು)

(ಆ) ಈ ಪಂಗಡದವರಿಗೆ ವಿಮಾನಯಾನ ಸಂಸ್ಥೆಯಲ್ಲಿ ಹುದ್ದೆಯನ್ನು ಕಲ್ಪಿಸಲಾಗಿದೆಯೇ ; (Placement)

(ಇ) ಈ ರೀತಿ ತರಬೇತಿ ಪಡೆದವರು ಉದ್ಯೋಗ ದೊರೆಯದೆ ಹೋಟೆಲ್ ಹಾಗೂ ಮುಂತಾದ ಕಡೆ ಕೆಲಸಕ್ಕೆ ಸೇರಿರುವುದು ಹಾಗೂ ತಮ್ಮ ಗ್ರಾಮಗಳಿಗೆ ವಾಪಸ್ಸು ಹೋಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಇವರಿಗೆ ಉದ್ಯೋಗ ಕಲ್ಪಿಸಲು ಕ್ರಮ ತೆಗೆದುಕೊಳ್ಳಲಾಗುವುದೇ ; ಇಲ್ಲಿಯವರೆಗೆ ಸರ್ಕಾರಿ ಸಂಸ್ಥೆಗಳಲ್ಲಿ ಉದ್ಯೋಗಾವಕಾಶ ಕಲ್ಪಿಸಿಕೊಡಲಾಗಿದೆಯೇ ?

## ತಾಲ್ಲೂಕು ಆಸ್ಪತ್ರೆ, ಆರೋಗ್ಯ ಕೇಂದ್ರಗಳಲ್ಲಿ ಖಾಲಿಯಿರುವ ಹುದ್ದೆಗಳು

**ಶ್ರೀ ಟಿ. ಜಾನ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೧೫೬ (೮೩೨) ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೊಡಗು ಜಿಲ್ಲೆಯಲ್ಲಿರುವ ತಾಲ್ಲೂಕು ಆಸ್ಪತ್ರೆ, ಸಮುದಾಯ ಆರೋಗ್ಯ ಕೇಂದ್ರ ಹಾಗೂ ಪ್ರಾಥಮಿಕ ಆರೋಗ್ಯ ಕೇಂದ್ರಗಳು ಎಷ್ಟು ;

(ಆ) ಪ್ರತಿಯೊಂದು ವಿಭಾಗದಲ್ಲಿ ಮಂಜೂರಾತಿ ದೊರೆತ ಹುದ್ದೆಗಳೆಷ್ಟು ; ಹಾಗೂ ಎಷ್ಟು ಹುದ್ದೆಗಳು ಖಾಲಿ ಇವೆ ;

(ಇ) ಖಾಲಿಯಿರುವ ಹುದ್ದೆಗಳನ್ನು ತುಂಬಲು ಯಾವ ಕ್ರಮ ಕೈಗೊಳ್ಳಲಾಗಿದೆ ;

(ಈ) ಜಿಲ್ಲೆಯಲ್ಲಿ ಯಾವ ಕೇಂದ್ರಗಳಿಗೆ ಆಂಬುಲೆನ್ಸ್ ಸೇವೆಗಳಿರುವುದಿಲ್ಲ ಹಾಗೂ ಸದರಿ ಕೇಂದ್ರಗಳಿಗೆ ಆಂಬುಲೆನ್ಸ್ ಸೇವೆ ಲಭ್ಯವಾಗಲು ಸರಕಾರ ತೆಗೆದುಕೊಂಡ ಕ್ರಮಗಳೇನು ?

## ಪಡಿತರ ವ್ಯವಸ್ಥೆ

**ಶ್ರೀ ಡಿ.ಎಸ್. ವೀರಯ್ಯ (ವಿಧಾನಸಭೆಯಿಂದ ಚುನಾಯಿತರಾದವರು) –**

೧೫೭ (೮೪೪) ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ನೀಡಿದ ಬಿ.ಪಿ.ಎಲ್. ಹಾಗೂ ಎ.ಪಿ.ಎಲ್. ಪಡಿತರ ಕಾರ್ಡುಗಳೆಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಪ್ರತಿ ತಿಂಗಳು ಸರಬರಾಜು ಆಗುವ ಆಹಾರದ ಪ್ರಮಾಣವೆಷ್ಟು ; (ಜಿಲ್ಲಾವಾರು)

(ಇ) ರಾಜ್ಯದಲ್ಲಿ ಈವರೆಗೆ ಎಷ್ಟು ನಕಲಿ ರೇಷನ್ ಕಾರ್ಡುಗಳನ್ನು ಮುಟ್ಟುಗೋಲು ಹಾಕಿಕೊಳ್ಳಲಾಗಿದೆ ; (ಜಿಲ್ಲಾವಾರು ಮಾಹಿತಿ ನೀಡುವುದು)

(ಈ) ಇಲ್ಲಿಯವರೆಗೆ ಅಕ್ಕಿ ಕಳ್ಳ ಸಾಗಾಣಿಕೆ ಕುರಿತು ಎಷ್ಟು ಪ್ರಕರಣಗಳು ದಾಖಲಾಗಿವೆ ; ಸರಕಾರ ಕೈಗೊಂಡ ಕ್ರಮವೇನು ?

## ಜಿಲ್ಲೆಯ ಆಸ್ಪತ್ರೆಗಳಲ್ಲಿ ರೋಗಿಗಳ ಪರದಾಟ

**ಶ್ರೀ ರಘುನಾಥ ರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು)** –

೧೫೮ (೮೪೧) ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೀದರ್ ಜಿಲ್ಲೆಯಲ್ಲಿ ಒಟ್ಟು ಎಷ್ಟು ಸಾರ್ವಜನಿಕ ಸರ್ಕಾರಿ ಆಸ್ಪತ್ರೆಗಳಿವೆ ; (ಪ್ರತ್ಯೇಕ ತಾಲ್ಲೂಕು ಮತ್ತು ಹೋಬಳಿ, ಗ್ರಾಮಗಳವಾರು ವಿವರ ನೀಡುವುದು)

(ಆ) ಈ ಎಲ್ಲಾ ಸರ್ಕಾರಿ ಆಸ್ಪತ್ರೆಗಳಲ್ಲಿ ಒಟ್ಟು ಎಷ್ಟು ಜನ ವೈದ್ಯರು, ನರ್ಸ್‌ಗಳು, ಅಧಿಕಾರಿಗಳು, ಸಿಬ್ಬಂದಿಗಳು ಕಾರ್ಯನಿರ್ವಹಿಸುತ್ತಿದ್ದಾರೆ ; ಹೊರಗುತ್ತಿಗೆ ನೌಕರರೆಷ್ಟು ; ಎಲ್ಲಾ ಆಸ್ಪತ್ರೆಗಳವಾರು ಸಂಪೂರ್ಣ ಮಾಹಿತಿ ನೀಡುವುದು ; (ಸಿಬ್ಬಂದಿಗಳ ಪದನಾಮದ ಪಟ್ಟಿಯ ವಿವರ ನೀಡುವುದು)

(ಇ) ಈ ಎಲ್ಲಾ ಆಸ್ಪತ್ರೆಗಳಲ್ಲಿ ಯಾರು ಯಾರು ಎಷ್ಟು ವರ್ಷಗಳಿಂದ ಒಂದೇ ಸ್ಥಳದಲ್ಲಿ ಕಾರ್ಯನಿರ್ವಹಿಸುತ್ತಿದ್ದಾರೆ ; ಜಿಲ್ಲಾ ಆಸ್ಪತ್ರೆಯಲ್ಲಿನ ಸಿಬ್ಬಂದಿಗಳು ಸಾರ್ವಜನಿಕರೊಂದಿಗೆ ಸಹಕರಿಸದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗಿದ್ದಲ್ಲಿ, ಮೇಲಾಧಿಕಾರಿಗಳ ವಿರುದ್ಧ ಯಾವ ಕ್ರಮ ಕೈಗೊಳ್ಳಲಾಗುವುದು ? (ಮಾಹಿತಿ ನೀಡುವುದು)

## ಗಂಗಾ ಕಲ್ಯಾಣ ಯೋಜನೆ

**ಶ್ರೀ ವೈ.ಎ. ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ)** –

೧೫೯ (೮೫೯) ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಡಾ: ಅಂಬೇಡ್ಕರ್ ಅಭಿವೃದ್ಧಿ ನಿಗಮದಿಂದ ಕಳೆದ ೫ ವರ್ಷಗಳಲ್ಲಿ ಗಂಗಾ ಕಲ್ಯಾಣ ಯೋಜನೆಯಡಿಯಲ್ಲಿ ಕೊರೆದಿರುವ ಕೊಳವೆ ಬಾವಿಗಳೆಷ್ಟು ; (ಜಿಲ್ಲಾವಾರು ಹೆಸರು ಹಾಗೂ ವಿಳಾಸವಾರು ಮಾಹಿತಿಯೊಂದಿಗೆ)

(ಆ) ಎಷ್ಟು ಕೊಳವೆ ಬಾವಿಗಳಲ್ಲಿ ನೀರಿನ ಪ್ರಮಾಣ ತೃಪ್ತಿಕರವಾಗಿದೆ ;

(ಇ) ಈಗ ಸದ್ಯಕ್ಕೆ ಕೊರೆದಿರುವ ಕೊಳವೆ ಬಾವಿಗಳಲ್ಲಿ ತೃಪ್ತಿಕರವಾಗಿ ಕಾರ್ಯ ನಿರ್ವಹಿಸುತ್ತಿರುವ ಕೊಳವೆ ಬಾವಿಗಳ ಸಂಖ್ಯೆ ಎಷ್ಟು ;

(ಈ) ಮೇಲ್ಕಂಡ ಯೋಜನೆಯಲ್ಲಿ ನೀರು ಬರದಿದ್ದರೂ ಅದಕ್ಕೆ ವೆಚ್ಚವನ್ನು ಭರಿಸಿರುವ ಪ್ರಕರಣಗಳೆಷ್ಟು ;

(ಉ) ಇಂತಹ ಪ್ರಕರಣಗಳಲ್ಲಿ ತಪ್ಪಿತಸ್ಥರ ವಿರುದ್ಧ ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## ಸೀಟ್ ಬ್ಲಾಕಿಂಗ್ ಹಗರಣಗಳು

**ಶ್ರೀ ಗೋ. ಮಧುಸೂದನ್ (ಪದವೀಧರರ ಕ್ಷೇತ್ರ) –**

೧೬೦ (೮೩೩) ವೈದ್ಯಕೀಯ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ವೈದ್ಯಕೀಯ ಶಿಕ್ಷಣ ಇಲಾಖೆಯಲ್ಲಿ ನಡೆದಿರುವ ಸೀಟ್ ಬ್ಲಾಕಿಂಗ್ ಹಗರಣವು ಎಷ್ಟು ವರ್ಷಗಳಿಂದ ನಡೆಯುತ್ತಿದೆ ; ಹಗರಣದಲ್ಲಿ ಭಾಗಿಯಾಗಿರುವ ವಿವಿಧ ವೈದ್ಯಕೀಯ ಮತ್ತು ದಂತ ವೈದ್ಯಕೀಯ ಕಾಲೇಜುಗಳ ಪಟ್ಟಿ ನೀಡುವುದು ;

(ಆ) ಈ ಎಲ್ಲ ಶಿಕ್ಷಣ ಸಂಸ್ಥೆಗಳು ಈ ರೀತಿಯ ಸೀಟ್ ಬ್ಲಾಕಿಂಗ್‌ನಿಂದ ಪ್ರತಿ ವರ್ಷ ಪಡೆದುಕೊಂಡಿರುವ ಸೀಟ್‌ಗಳ ವಿವರ ನೀಡುವುದು ; (ವರ್ಷವಾರು ಮತ್ತು ವಿಷಯವಾರು) (ಸ್ನಾತಕೋತ್ತರ)

(ಇ) ಇವುಗಳ ಮೇಲೆ ಯಾವ ರೀತಿಯ ಕ್ರಮ ಕೈಗೊಳ್ಳಲಾಗಿದೆ ?

## ಪ್ರಾಥಮಿಕ ಆರೋಗ್ಯ ಕೇಂದ್ರಗಳ ವೈದ್ಯರು/ಸಿಬ್ಬಂದಿ

**ಶ್ರೀ ನಾರಾಯಣ ಸಾ. ಬಾಂಡಗೆ (ವಿಧಾನಸಭೆಯಿಂದ ಚುನಾಯಿತರಾದವರು) –**

೧೬೧ (೮೩೦) ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬಾಗಲಕೋಟೆ ಜಿಲ್ಲಾ ಸರ್ಕಾರಿ ಆಸ್ಪತ್ರೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ವೈದ್ಯರು ಹಾಗೂ ಸಿಬ್ಬಂದಿಯವರ ಸಂಖ್ಯೆ ಎಷ್ಟು ; ಖಾಲಿ ಇರುವ ವೈದ್ಯರ ಹಾಗೂ ಸಿಬ್ಬಂದಿಯ ಸಂಖ್ಯೆ ಎಷ್ಟು ;

(ಆ) ಖಾಲಿ ಇರುವ ವೈದ್ಯರನ್ನು ಹಾಗೂ ಸಿಬ್ಬಂದಿಯನ್ನು ತುಂಬಲು ಸರ್ಕಾರವು ಯಾವ ಕ್ರಮಗಳನ್ನು ಜರುಗಿಸಿದೆ ;

(ಇ) ಜಿಲ್ಲೆಯಲ್ಲಿ ಇರುವ ಪ್ರಾಥಮಿಕ ಆರೋಗ್ಯ ಕೇಂದ್ರಗಳು ಎಷ್ಟು ; (ವಿವರ ನೀಡುವುದು) ಎಷ್ಟು ವೈದ್ಯರು ಇದ್ದಾರೆ ; ಜಿಲ್ಲೆಯ ಪ್ರಾಥಮಿಕ ಆರೋಗ್ಯ ಕೇಂದ್ರಗಳಿಗೆ ಔಷಧಿಗಳು ಸಮರ್ಪಕ ಸರಬರಾಜು ಆಗುತ್ತಿದೆಯೇ ;

(ಈ) ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ ಖಾಲಿ ಇರುವ ವೈದ್ಯರ ಹಾಗೂ ಸಿಬ್ಬಂದಿಯನ್ನು ತುಂಬಲು ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು ?

## ವಸತಿ ಶಾಲೆಗಳು

**ಶ್ರೀ ರಾಮಚಂದ್ರ ಗೌಡ (ಪದವೀಧರರ ಕ್ಷೇತ್ರ) –**

೧೬೨ (೮೧೪) ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸಮಾಜ ಕಲ್ಯಾಣ ಇಲಾಖೆಯಡಿ ಕಾರ್ಯ ನಿರ್ವಹಿಸುತ್ತಿರುವ ವಸತಿ ಶಾಲೆಗಳ ಪ್ರತ್ಯೇಕ ವಿವರ ನೀಡುವುದು ;

(ಆ) ಮೂಲಭೂತ ಸೌಕರ್ಯದ ಕೊರತೆಯಿಂದ ಬಳಲುತ್ತಿರುವ ವಸತಿ ಶಾಲೆಗಳು ಯಾವುವು ; (ಪ್ರತ್ಯೇಕ ವಿವರ ನೀಡುವುದು)

(ಇ) ಇದನ್ನು ಸರಿಪಡಿಸಲು ತಗಲುವ ಅಂದಾಜು ಹಣವೆಷ್ಟು ;

(ಈ) ಈ ವಸತಿ ಶಾಲೆಗಳನ್ನು ಸರಿಪಡಿಸಲು ಸರ್ಕಾರ ಯಾವ ರೀತಿಯ ಕ್ರಮ ಕೈಗೊಳ್ಳುವುದು ?

## ಮೈಸೂರು ನಗರದಲ್ಲಿ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆ

**ಶ್ರೀ ಎಸ್. ನಾಗರಾಜ್ (ಸಂದೇಶ್ ನಾಗರಾಜ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೧೬೩ (೮೧೬) ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮೈಸೂರಿನಲ್ಲಿ ೧೫೦ ಕೋಟಿ ವೆಚ್ಚದಲ್ಲಿ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆಯನ್ನು ಸ್ಥಾಪಿಸುವ ಪ್ರಸ್ತಾವನೆ ಸರ್ಕಾರದ ಮುಂದೆ ಇದೆಯೇ ;

(ಆ) ಈ ಯೋಜನೆಯ ರೂಪುರೇಷೆಗಳೇನು ; ಈ ಆಸ್ಪತ್ರೆಗೆ ಸ್ಥಳವನ್ನು ಗೊತ್ತುಪಡಿಸಲಾಗಿದೆಯೇ ; ಯಾವಾಗ ಈ ಆಸ್ಪತ್ರೆಯ ನಿರ್ಮಾಣ ಕಾಮಗಾರಿಯನ್ನು ಆರಂಭಿಸಲಾಗುವುದು ; ಯಾವಾಗ ಈ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆಯ ನಿರ್ಮಾಣವನ್ನು ಪೂರ್ಣಗೊಳಿಸಿ ಜನತೆಯ ಸೇವೆಗೆ ಒದಗಿಸಲಾಗುವುದು ;

(ಇ) ಮೈಸೂರು ಮತ್ತು ಚಾಮರಾಜನಗರ ಜಿಲ್ಲೆಗಳಲ್ಲಿ ಖಾಲಿ ಇರುವ ವೈದ್ಯರು ಮತ್ತು ವೈದ್ಯಕೀಯ ಸಿಬ್ಬಂದಿ ಹುದ್ದೆಗಳ ಸಂಖ್ಯೆ ಎಷ್ಟು ; (ತಾಲ್ಲೂಕುವಾರು ವಿವರ ನೀಡುವುದು) ಈ ಹುದ್ದೆಗಳನ್ನು ಭರ್ತಿ ಮಾಡಲು ಕೈಗೊಂಡ ಕ್ರಮಗಳೇನು ;

(ಈ) ಮೈಸೂರು ಜಿಲ್ಲಾ ಆಸ್ಪತ್ರೆಯನ್ನು (District Hospital) ಸ್ಥಾಪಿಸಲು ಕ್ರಮ ತೆಗೆದುಕೊಳ್ಳಲಾಗಿದೆಯೇ ; ಈ ಆಸ್ಪತ್ರೆಯ ಸ್ಥಾಪನೆ ಯಾವ ಹಂತದಲ್ಲಿದೆ ? (ಪೂರ್ಣ ವಿವರಗಳನ್ನು ಒದಗಿಸುವುದು)

## ಶಾಸಕರ ಪ್ರದೇಶಾಭಿವೃದ್ಧಿ ನಿಧಿ ಬಳಕೆ

**ಶ್ರೀ ಭಾನುಪ್ರಕಾಶ (ವಿಧಾನಸಭೆಯಿಂದ ಚುನಾಯಿತರಾದವರು) –**

೧೬೪ (೮೫೨) ಯೋಜನೆ ಮತ್ತು ಸಾಂಖ್ಯಿಕ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಮತ್ತು ವಿಜ್ಞಾನ ಹಾಗೂ ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಶಿವಮೊಗ್ಗ ಜಿಲ್ಲೆಯಲ್ಲಿ "ಶಾಸಕ ಪ್ರದೇಶಾಭಿವೃದ್ಧಿ ನಿಧಿಯಲ್ಲಿ" ಕಳೆದ ೩ ವರ್ಷಗಳಲ್ಲಿ ಬಿಡುಗಡೆಯಾದ ಅನುದಾನ ಎಷ್ಟು ; ಬಳಕೆ ಆಗಿ ಪೂರ್ಣವಾಗಿರುವ ಕಾಮಗಾರಿಗಳು ಎಷ್ಟು ; ಬಳಕೆ ಆಗದಿರುವ ಹಣ ಎಷ್ಟು ; (ಪ್ರತಿಯೊಬ್ಬ ಶಾಸಕರ ನಿಧಿ ವಿವರ ನೀಡುವುದು)

(ಆ) ಶಾಸಕರ ಪ್ರದೇಶಾಭಿವೃದ್ಧಿ ನಿಧಿ ಮೂಲಕ ನಡೆಯುತ್ತಿರುವ ಅಭಿವೃದ್ಧಿ ಕಾಮಗಾರಿಗಳು ನಿಧಾನಗತಿಯಲ್ಲಿ ನಡೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಹಾಗಿದ್ದಲ್ಲಿ, ಕಾರಣಗಳೇನು ; ಈ ನಿಟ್ಟಿನಲ್ಲಿ ಸರ್ಕಾರದ ಪರಿಹಾರ ಯೋಜನೆ ಏನು ?

## ಸರ್ಕಾರಿ ಆಸ್ಪತ್ರೆಗಳಲ್ಲಿನ ಸ್ವಚ್ಛತಾ ಕಾರ್ಯಕ್ಕೆ ಹೊರಗುತ್ತಿಗೆ

**ಶ್ರೀ ಕೆ. ಗೋವಿಂದರಾಜ್ (ವಿಧಾನಸಭೆಯಿಂದ ಚುನಾಯಿತರಾದವರು) –**

೧೬೫ (೮೩೬) ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಆಸ್ಪತ್ರೆಗಳ ಸ್ವಚ್ಛತೆ ಕಾಪಾಡುವ ನಿಟ್ಟಿನಲ್ಲಿ ಹೊರಗುತ್ತಿಗೆಯನ್ನು ನೀಡಲಾಗಿದೆಯೇ ; ಹಾಗಿದ್ದಲ್ಲಿ, ಕಳೆದ ೪ ವರ್ಷಗಳ ಅವಧಿಯಲ್ಲಿ ಇದಕ್ಕೆ ವಿನಿಯೋಗಿಸಲಾದ ಅನುದಾನ ಎಷ್ಟು ;

(ಆ) ಹೊರಗುತ್ತಿಗೆಯನ್ನು ಪಡೆದ ಖಾಸಗಿ ಸಂಸ್ಥೆಗಳು ಯಾವುವು ; ಕಳೆದ ೪ ವರ್ಷಗಳ ಅವಧಿಯಲ್ಲಿ ಅವುಗಳಿಗೆ ಪಾವತಿಸಲಾದ ಹಣ ಎಷ್ಟು ; (ವರ್ಷಾವಾರು, ಸಂಸ್ಥೆವಾರು ಪ್ರತ್ಯೇಕ ಮಾಹಿತಿ ಒದಗಿಸುವುದು)

(ಇ) ಆಸ್ಪತ್ರೆಗಳಲ್ಲಿನ ಸ್ವಚ್ಛತೆ ಕಾಪಾಡಲು ಸರ್ಕಾರವು ಹಣವನ್ನು ವಿನಿಯೋಗಿಸುತ್ತಿದ್ದರೂ, ಆಸ್ಪತ್ರೆಗಳಲ್ಲಿನ ಸ್ವಚ್ಛತೆಯು ಅಸಹನೀಯವಾಗಿರುವ ಅಂಶವನ್ನು ಸರ್ಕಾರ ಗಂಭೀರವಾಗಿ ಪರಿಗಣಿಸಿದೆಯೇ ; ಹಾಗಿದ್ದಲ್ಲಿ, ಈ ನಿಟ್ಟಿನಲ್ಲಿ ಕೈಗೊಂಡ ಕ್ರಮಗಳು ಏನು ? (ಸಂಪೂರ್ಣ ಮಾಹಿತಿ ಒದಗಿಸುವುದು)

**ವಿ. ಶ್ರೀಶ್**
ಕಾರ್ಯದರ್ಶಿ
ಕರ್ನಾಟಕ ವಿಧಾನ ಪರಿಷತ್ತು

---

ಸರ್ಕಾರಿ ಮುದ್ರಣಾಲಯ, ಬೆಂಗಳೂರು, ಕಾ.ಸೂ. 304, ಪ್ರತಿಗಳು- 1500 – ಪಿ8